4498

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 280

ಸದಸ್ಯರ ಹೆಸರು : ಡಾ॥ ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ),

ಉತ್ತರಿಸಬೇಕಾದ ದಿನಾಂಕ : 15-02-2024

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರಿ ನೌಕರರ ಬಹುದಿನಗಳ ಬೇಡಿಕೆಯಾದ 7ನೇ ವೇತನ ಆಯೋಗ ಜಾರಿಗೊಳಿಸುವಲ್ಲಿ ವಿಳಂಬ ಮಾಡುತ್ತಿರುವುದು ನೌಕರರಿಗೆ ನಿರಾಶೆ ಮಾಡಿದಂತಾಗುವುದಿಲ್ಲವೇ; | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆಯ ಅಗತ್ಯತೆಯನ್ನು ಪರಿಶೀಲಿಸಲು ದಿನಾಂಕ 19-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022ರಲ್ಲಿ ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶಿಸಲಾಗಿರುತ್ತದೆ. ದಿನಾಂಕ 06-11-2023ರ ಆದೇಶದಲ್ಲಿ ಆಯೋಗದ ಕಾಲಾವಧಿಯನ್ನು ದಿನಾಂಕ 15-03-2024ರವರೆಗೆ ವಿಸ್ತರಿಸಿ ಆದೇಶಿಸಲಾಗಿರುತ್ತದೆ.<br><br>ಮುಂದುವರೆದು, ವೇತನ ಆಯೋಗದ ಅಂತಿಮ ವರದಿಯನ್ನು ಕಾಯ್ದಿರಿಸಿ, ರಾಜ್ಯಸರ್ಕಾರದ ನೌಕರರು ಮತ್ತು ನಿವೃತ್ತಿ ವೇತನದಾರರಿಗೆ ಅವರ ಮೂಲ ವೇತನ/ಮೂಲ ಪಿಂಚಣಿಯ ಶೇ.17ರಷ್ಟು ಮಧ್ಯಂತರ ಪರಿಹಾರವನ್ನು ದಿನಾಂಕ: 01.04.2023ರಿಂದ ಅನ್ವಯವಾಗುವಂತೆ ಮಂಜೂರು ಮಾಡಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಪ್ರಸ್ತುತ ರಾಜ್ಯ ಸರ್ಕಾರವು ವೇತನ ಆಯೋಗದ ಅಂತಿಮ ವರದಿಯ ನಿರೀಕ್ಷೆಯಲ್ಲಿರುತ್ತದೆ. |
| (ಆ) | ಸರ್ಕಾರಿ ನೌಕರರ 7ನೇ ವೇತನದ ಬೇಡಿಕೆಯನ್ನು ಈಡೇರಿಸುವುದು ಯಾವಾಗ? | |

ಸಂ: ಆಇ 7 ಎಸ್‌ಆರ್‌ಪಿ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ